# ನೇಮಕಾತಿ-2019

## ಅಧಿಸೂಚನೆ ಸಂಖ್ಯೆ. 83/ನೇಮಕಾತಿ-2/2019-20, ದಿನಾಂಕ:

**ಒಟ್ಟು ಹುದ್ದೆಗಳು : 07**

## ಇಂಡಿಯಾ ರಿಸರ್ವ್ ಬೆಟಾಲಿಯನ್ ಸಬ್-ಇನ್ಸ್‌ಪೆಕ್ಟರ್ (ಐಆರ್‌ಬಿ) (ಪುರುಷ) (ಹೈ-ಕ) ಹುದ್ದೆಳಿಗೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಸೂಚನೆಗಳು.

- ಅರ್ಜಿಗಳನ್ನು ಆನ್-ಲೈನ್ (On-line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸಲು ಅವಕಾಶವಿರುತ್ತದೆ.
- ಅರ್ಜಿದಾರರು ಅಧಿಸೂಚನೆಯಲ್ಲಿ ನೀಡಲಾಗಿರುವ ಮೀಸಲಾತಿ ವರ್ಗೀಕರಣವನ್ನು ನೋಡಿ ಅರ್ಜಿ ಸಲಿಸುವಂತೆ ಸೂಚಿಸಲಾಗಿದೆ.
- **ಆನ್-ಲೈನ್ (On-line) ಮುಖಾಂತರ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ವಿಧಾನ :**

ಅರ್ಜಿದಾರ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in or rec17.ksp-online.in ಅಥವಾ http://srpsisf17.ksp-online.inನ ಲಿಂಕ್‌ನಲ್ಲಿ ಅರ್ಜಿ ಭರ್ತಿ ಮಾಡುವ ಮುನ್ನ ಮಾಹಿತಿಸೂಚಿ/ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ಭರ್ತಿಮಾಡಬೇಕು. ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅರ್ಜಿದಾರ ಒಂದು ಬಿಳಿ ಹಾಳೆಯ ಮೇಲೆ ಪಾಸ್‌ಪೋರ್ಟ್ ಅಳತೆಯ ಬಣ್ಣದ ಭಾವಚಿತ್ರ, ಸಹಿ ಮತ್ತು ಅಧಿಸೂಚನೆಯ ಕ್ರಮ ಸಂಖ್ಯೆ 8(ಬಿ)ರಲ್ಲಿ ನಮೂದಿಸಲಾಗಿರುವ ಯಾವುದಾದರು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ (Soft Copy - less than 250 KB) ಸ್ಕ್ಯಾನ್ ಮಾಡಿಟ್ಟುಕೊಂಡಿರಬೇಕು. ನಂತರ ಅರ್ಜಿದಾರನ ಹೆಸರು, ಜಾತಿ, ಮೀಸಲಾತಿಗಳ ವಿವರ, ಹುಟ್ಟಿದ ದಿನಾಂಕ ಇತ್ಯಾದಿ ವಿವರಗಳನ್ನು ಭರ್ತಿಮಾಡಿ ಕೊನೆಯದಾಗಿ ಸ್ಕ್ಯಾನ್ ಮಾಡಿಟ್ಟುಕೊಂಡಿರುವ ಭಾವಚಿತ್ರ, ಸಹಿ ಮತ್ತು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ ಕಂಪ್ಯೂಟರ್ ಮುಖೇನ ಅಪ್‌ಲೋಡ್ (Upload) ಮಾಡುವುದು. ಇಲ್ಲವಾದಲ್ಲಿ ಅಂತಹ ಅರ್ಜಿದಾರರು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಿ ಮುಂದುವರೆಯಲು ಸಾಧ್ಯವಾಗುವುದಿಲ್ಲ. ಅರ್ಜಿದಾರ ನೀಡಿರುವ ವಿವರಗಳು ಎಲ್ಲಾ ರೀತಿಯಿಂದಲೂ ಸಮರ್ಪಕವಾಗಿದ್ದಲ್ಲಿ ಮಾತ್ರ ಚಲನ್

ಮುದ್ರಿಸಬಹುದು. ಚಲನ್ ಮುದ್ರಿಸಲು 'ಜನರೇಟ್ ಚಲನ್ ಬಟನ್' ಮೇಲೆ ಕ್ಲಿಕ್ ಮಾಡಿದಾಗ ತ್ರಿಪತಿ (Triplicate) ಬ್ಯಾಂಕ್ ಚಲನ್ ಸೃಜನೆಯಾಗುತ್ತದೆ. ಆ ಚಲನ್‌ನಲ್ಲಿ ಅರ್ಜಿಯ ಸಂಖ್ಯೆಯೊಂದಿಗೆ, ನಿಮ್ಮ ಭಾವಚಿತ್ರ, ಪ್ರವರ್ಗ, ಮೀಸಲಾತಿಗಳ ವಿವರ ಮತ್ತು ಪಾವತಿಸಬೇಕಾಗಿರುವ ನಿಗದಿತ ಶುಲ್ಕಗಳ ವಿವರಗಳು ಇರುತ್ತದೆ. ಆ ಚಲನ್ ಪ್ರತಿಯನ್ನು ಮುದ್ರಿಸಿ/ಪ್ರಿಂಟ್ ಮಾಡಿಕೊಳ್ಳತಕ್ಕದ್ದು.

- ನಂತರ ಅರ್ಜಿದಾರ ಮುದ್ರಿಸಿಕೊಳ್ಳಲಾದ ಚಲನ್‌ನಲ್ಲಿ ನಮೂದಾಗಿರುವ ಒಟ್ಟು ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿಯೇ ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ ಅಥವ ಸ್ಥಳೀಯ ಅಂಚೆ ಕಛೇರಿಗಳಲ್ಲಿ ಪಾವತಿಸಬೇಕಾಗಿರುತ್ತದೆ. ಶುಲ್ಕ ಪಾವತಿಸಿದ ನಂತರ ಚಲನ್‌ನ 'ಅಭ್ಯರ್ಥಿ ಪ್ರತಿ'ಯನ್ನು ಇಟ್ಟುಕೊಂಡಿರತಕ್ಕದು.
- ಅಭ್ಯರ್ಥಿಯ ಶುಲ್ಕ ಪಾವತಿಸಿದ ಮರುದಿನ ಪುನಃ ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in or rec17.ksp-online.in or http://srpsisf17.ksp-online.in ನ ಲಿಂಕ್‌ನಲ್ಲಿ ಹುದ್ದೆಗೆ ಸಂಬಂಧಿಸಿದ ವೆಬ್‌ಪೇಜ್‌ನ My Application ನ್ನು ಕ್ಲಿಕ್ ಮಾಡಿ, ತನ್ನ ಅರ್ಜಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿದ ನಂತರ ಅರ್ಜಿ ತೆರೆಯುತ್ತದೆ ಹಾಗೂ ಅಭ್ಯರ್ಥಿಯು ಭರ್ತಿ ಮಾಡಿರುವ ಎಲ್ಲಾ ವಿವರಗಳನ್ನು ಒಳಗೊಂಡಂತೆ ಅರ್ಜಿಯು ಸೃಜನೆಯಾಗುತ್ತದೆ, ಭರ್ತಿ ಮಾಡಿದ ಆನ್-ಲೈನ್ ಅರ್ಜಿಯ ಪ್ರತಿಯನ್ನು ಪ್ರಿಂಟ್ ಮಾಡಿಟ್ಟುಕೊಳ್ಳತಕ್ಕದ್ದು. ಈ ಅರ್ಜಿ ಪ್ರತಿಯು ಮುಂದಿನ ನೇಮಕಾತಿ ಪ್ರಕ್ರಿಯೆಯ ಎಲ್ಲಾ ಹಂತಗಳಿಗೆ ಅವಶ್ಯಕವಾಗಿರುತ್ತದೆ.
- ಆನ್-ಲೈನ್ ಮುಖಾಂತರ ದಿನಾಂಕ: 07.06.201 ರಂದು ಬೆಳಗ್ಗೆ 10-00 ಗಂಟೆಯಿಂದ ದಿನಾಂಕ: 24.06.2019ರ ಸಂಜೆ 06.00 ಗಂಟೆಯವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಪರೀಕ್ಷಾ ಶುಲ್ಕವನ್ನು ನಗದು ರೂಪದಲ್ಲಿ ಪಾವತಿಸಲು ದಿನಾಂಕ: 27/06/2019ರ ಬ್ಯಾಂಕ್ ಕಛೇರಿಯ ವೇಳೆಯು ಕೊನೆಯ ದಿನಾಂಕವಾಗಿರುತ್ತದೆ. ಶುಲ್ಕ ಪವಾತಿಸಿದ ಒಂದು ದಿನದ ನಂತರ ಇಂಟರ್‌ನೆಟ್‌ನ್ನು ವೀಕ್ಷಿಸಬೇಕು. ಅರ್ಹಗೊಳ್ಳದಿದ್ದಲ್ಲಿ ಶುಲ್ಕ ಪಾವತಿಸಿದ ಬ್ಯಾಂಕ್‌ನ್ನು ಸಂಪರ್ಕಿಸತಕ್ಕದ್ದು.
- ನೇಮಕಾತಿಗೆ ಸಂಬಂಧಪಟ್ಟ ಎಲ್ಲಾ ಮಾಹಿತಿಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in or rec17.ksp-online.in or http://srpsisf17.ksp-online.inನ ಲಿಂಕ್‌ನಲ್ಲಿ ಲಭ್ಯವಿರುವ "MY APPLICATION" ಮುಖಾಂತರ ಪಡೆದುಕೊಳ್ಳಲು ಸೂಚಿಸಲಾಗಿದೆ. ಉದಾಹರಣೆ: ಅರ್ಜಿ ಯಶಸ್ವಿಯಾಗಿರುವ ಕುರಿತು ಅರ್ಹತಾ ಪಟ್ಟಿ, ಸಹಿಷ್ಣುತೆ ಮತ್ತು

ದೇಹದಾರ್ಢ್ಯತೆ ಪರೀಕ್ಷೆಯ ದಿನಾಂಕ, ಕರೆಪತ್ರ/ಲಿಖಿತ ಪರೀಕ್ಷೆಯ ದಿನಾಂಕ, ಕರೆಪತ್ರಗಳು/ವೈದ್ಯಕೀಯ ಪರೀಕ್ಷೆಯ ದಿನಾಂಕ, ಕರೆಪತ್ರಗಳು ಇತ್ಯಾದಿ,

- ಅರ್ಜಿದಾರನು ಆನ್‌ಲೈನ್‌ನಲ್ಲಿ ಅರ್ಜಿಯನ್ನು ತುಂಬಲು ಗಣಕಯಂತ್ರದಲ್ಲಿ ಅಂತರ್ಜಾಲದ SOFTWARE , Internet Explorer 8 or 9, or Google Chroma or Firefox ಆಳವಡಿಸಿಕೊಂಡಿರಬೇಕು. ಅರ್ಜಿಯ ಚಲನ್ ಮತ್ತು ನೋಂದಾಯಿಸಿದ ಅರ್ಜಿಯ ಪ್ರತಿಯನ್ನು ಗಣಕಯಂತ್ರದಲ್ಲಿ ಪಡೆಯಲು PDF Software ಆಳವಡಿಸಿಕೊಂಡಿರಬೇಕು.
- ಗಣಕಯಂತ್ರದ ಪರದೆಯ ಮೇಲೆ ಚಿತ್ತರಿಸಿರುವ ಕನ್ನಡದ ಅಕ್ಷರಗಳು ನುಡಿ ತಂತ್ರಾಂಶವನ್ನು ಬಳಸಿ ಬರೆಯಲಾಗಿದೆ, ಕನ್ನಡ ಅಕ್ಷರಗಳು ಗಣಕಯಂತ್ರದಲ್ಲಿ JUNK CHARACTER ರೂಪದಲ್ಲಿ ಗಣಕಯಂತ್ರದ ಪರದೆಯ ಮೇಲೆ ಮೂಡಿದರೆ, ಅದನ್ನು ಸರಿಪಡಿಸಲು ಗಣಕಯಂತ್ರದಲ್ಲಿ NUDI SOFTWARE ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.
- ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿ ಮಾಡಿದ ನಂತರ ನಿಗದಿತ ಶುಲ್ಕ ಪಾವತಿಸಲು ಸೃಜನೆಯಾಗುವ ಬ್ಯಾಂಕ್ ಚಲನ್ ಮತ್ತು ಪೂರ್ಣಗೊಳಸಿದ ಅರ್ಜಿಯನ್ನು ಗಣಕಯಂತ್ರದ ಪರದೆಯ ಮೇಲೆ ಚಿತ್ತರಿಸಲು ಗಣಕಯಂತ್ರದಲ್ಲಿ PDF Reader Software ಅಳವಡಿಸಿರಬೇಕು. ಇಲ್ಲದಿದ್ದಲ್ಲಿ PDF Reader Software ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.
- **ಅರ್ಜಿ ಸಲ್ಲಿಸಲು ಪ್ರಾರಂಭ ಮತ್ತು ಕೊನೆಯ ದಿನಾಂಕ ಹಾಗೂ ಶುಲ್ಕ ಪಾವತಿಸಲು ಕೊನೆಯ ದಿನಾಂಕ:**
  1. **ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 07/06/2019, ಬೆಳಗ್ಗೆ 10:00 ಗಂಟೆಯಿಂದ.**
  2. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 24/06/2019, ಸಂಜೆ 06:00 ಗಂಟೆವರೆಗೆ.**
  3. **ಶುಲ್ಕವನ್ನು ಅಧಿಕೃತ ಬ್ಯಾಂಕ್ ಶಾಖೆಗಳ ಕಛೇರಿ ವೇಳೆಯಲ್ಲಿ ಪಾವತಿಸಲು ಕೊನೆಯ ದಿನಾಂಕ: 27/06/2019.**
- ವಯೋಮಿತಿ :

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ 24.06.2019ಕ್ಕೆ ಅಭ್ಯರ್ಥಿಗೆ ಕನಿಷ್ಟ 21 ವರ್ಷ ವಯಸ್ಸಾಗಿರಬೇಕು ಹಾಗೂ ದಿನಾಂಕ: 24.06.2019ಕ್ಕೆ ಈ ಕೆಳಕಂಡ ವಯಸ್ಸು ಮೀರಿರಬಾರದು.

ಎ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 30ವರ್ಷಗಳು.
ಬಿ) ಇತರೆ ಅಭ್ಯರ್ಥಿಗಳಿಗೆ 28 ವರ್ಷಗಳು.

ಸೇವಾನಿರತ ಅಭ್ಯರ್ಥಿಗಳಿಗೆ:

ಸಿ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 40 ವರ್ಷಗಳು.
ಡಿ) ಇತರೆ ಅಭ್ಯರ್ಥಿಗಳಿಗೆ 35 ವರ್ಷಗಳು.

- ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಯನ್ನು ಸಲ್ಲಿಸುವುದು.
- ಅರ್ಜಿ ಪೂರ್ಣಗೊಳಿಸಿದ ನಂತರ ಚಲನ್ ಮುಖಾಂತರ ಶುಲ್ಕವನ್ನು ಪಾವತಿಸುವಂತೆ ಸೂಚಿಸಲಾಗಿದೆ.
- ಶುಲ್ಕ ಪಾವತಿಸಿದ ಮರುದಿನ/ಎರಡು ದಿನದ ನಂತರ ಅರ್ಜಿಯ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನ ಮುಖಾಂತರ ಪಡೆಯಲು ಸೂಚಿಸಲಾಗಿದೆ.
- ಶುಲ್ಕವನ್ನು ಹೆಚ್.ಡಿ.ಎಫ್.ಸಿ ಬ್ಯಾಂಕಿನ ಅಧಿಕೃತ ಶಾಖೆಗಳಲ್ಲಿ ಅಥವಾ ಸ್ಥಳೀಯ ಅಂಚೆ ಕಛೇರಿಗಳಲ್ಲಿ ಪಾವತಿಸತಕ್ಕದ್ದು.
- ನಿಗದಿತ ಶುಲ್ಕವನ್ನು ಬ್ಯಾಂಕ್‌ನಲ್ಲಿ ಪಾವತಿಸಿದ ನಂತರ, ಬ್ಯಾಂಕ್ ಸಿಬ್ಬಂದಿಯವರು ಬ್ರಾಂಚ್‌ಕೋಡ್, ಜರ್ನಲ್ ಸಂಖ್ಯೆ, ಶುಲ್ಕ ಸಂದಾಯವಾದ ದಿನಾಂಕ ಮತ್ತು ಶುಲ್ಕ ಸ್ವೀಕರಿಸಿರುವವರ ಸಹಿಯೊಂದಿಗೆ ಮಾಹಿತಿಯನ್ನು ಸರಿಯಾಗಿ ನಮೂದಿಸಿರುವರೆಂದು ಅರ್ಜಿದಾರರು ಖಾತ್ರಿ ಪಡಿಸಿಕೊಳ್ಳಲು ಸೂಚಿಸಲಾಗಿದೆ.
- ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿ ಮಾಡುವ ಸಂದರ್ಭದಲ್ಲಿ ತಾಂತ್ರಿಕ ಅಥವಾ ಬೇರೆ ಸಮಸ್ಯೆ ಎದುರಾದಲ್ಲಿ ನೇಮಕಾತಿ ಸಮಿತಿಯ ಸಹಾಯವಾಣಿ ಸಂಖ್ಯೆ: 080-2294-3346ಗೆ ಕರೆ ಮಾಡಿ ಅಗತ್ಯ ಮಾಹಿತಿಯನ್ನು ಪಡೆದು ಅರ್ಜಿಯನ್ನು ಸಲ್ಲಿಸಬಹುದು.
- ನಿಗದಿತ ದಿನಾಂಕದ ನಂತರ ಶುಲ್ಕವನ್ನು ಪಾವತಿಸಿದ ಅರ್ಜಿದಾರರ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹೆಚ್.ಡಿ.ಎಫ್.ಸಿ ಬ್ಯಾಂಕ್ ಮತ್ತು ಅಂಚೆ ಕಛೇರಿಯಲ್ಲಿ ಹೊರತು ಪಡಿಸಿ ಬೇರೆ ಯಾವುದೇ ಬ್ಯಾಂಕ್ ಅಥವಾ ಬೇರೆ ಕಛೇರಿಯಲ್ಲಿ ಹಣ ಪಾವತಿಸತಕ್ಕದ್ದಲ್ಲ.
- ಅರ್ಜಿ ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಆನ್‌ಲೈನ್ ಮೂಲಕ ಅಗತ್ಯ ಮಾಹಿತಿ ತುಂಬಿ ಬ್ಯಾಂಕ್ ಚಲನ್‌ನ್ನು ಸೃಜಿಸಿ, ಆನ್‌ಲೈನ್‌ನಲ್ಲಿ ಡೌನ್ ಲೋಡ್ ಮಾಡಿದ ಚಲನ್ ಮೂಲಕ ಮಾತ್ರವೇ ಹೆಚ್.ಡಿ.ಎಫ್.ಸಿ ಬ್ಯಾಂಕ್ ಅಥವಾ ಅಂಚೆ ಕಛೇರಿಯಲ್ಲಿ ಶುಲ್ಕ ಪಾವತಿಸಬಹುದಾಗಿದೆ. ಬೇರ್ಯಾವುದೇ ಬ್ಯಾಂಕಿನಲ್ಲಿ ಹಣ ಪಾವತಿಸಲು ಅವಕಾಶವಿಲ್ಲ. ಬ್ಯಾಂಕ್ ಹುಂಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಅಥವಾ ಇನ್ಯಾವುದೇ ಸ್ವರೂಪದಲ್ಲಿ ಶುಲ್ಕ ಪಾವತಿಸತಕ್ಕದ್ದಲ್ಲ ಹಾಗೂ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

- ಒಮ್ಮೆ ಪಾವತಿಸಿದ ಶುಲ್ಕವನ್ನು ಯಾವುದೇ ಕಾರಣಗಳಿಂದಲೂ ಹಿಂದಿರುಗಿಸಲಾಗುವುದಿಲ್ಲ.
- ಮೀಸಲಾತಿ ಕೋರುವ ಪ್ರಮಾಣ ಪತ್ರಗಳು ಅಧಿಸೂಚನೆಯಲ್ಲಿ ನಮೂದಿಸಿರುವಂತಹ ನಿಯಮಗಳ ನಮೂನೆಯಲ್ಲಿಯೇ ಇರಬೇಕು. ಸದರಿ ಪ್ರಮಾಣ ಪತ್ರಗಳನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.
- ಯಾವುದೇ ದಾಖಲೆಗಳನ್ನು ಅಂಚೆ ಮೂಲಕವಾಗಲಿ ಅಥವಾ ಮುದ್ದಾಂ ಆಗಿ ಸಲ್ಲಿಸತಕ್ಕದ್ದಲ್ಲ.
- ಮೀಸಲಾತಿಯನ್ನು ಕೋರ ಬಯಸುವ ಅರ್ಜಿದಾರರುಗಳು ಆನ್‌ಲೈನ್ ಅರ್ಜಿಯಲ್ಲಿ ಮೀಸಲಾತಿ ಸೌಲಭ್ಯಕ್ಕಾಗಿ ಇರುವ ಅಂಕಣವನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು. ಅಂಕಣವನ್ನು ಖಾಲಿ ಬಿಟ್ಟಿದ್ದಲ್ಲಿ ಸಾಮಾನ್ಯ ವರ್ಗ ಎಂದು ಪರಿಗಣಿಸಲಾಗುವುದು. ನಂತರ ಯಾವುದೇ ಹಂತದಲ್ಲಿ ಮೀಸಲಾತಿಯನ್ನು ಸೇರ್ಪಡೆ ಮಾಡಲು ಅವಕಾಶವಿರುವುದಿಲ್ಲ. ಒಂದು ವೇಳೆ ತಪ್ಪಾಗಿ ನಮೂಧಿಸಿದ್ದರೆ, ನಂತರ ತಿದ್ದುಪಡಿಗೆ ಅವಕಾಶವಿರುವುದಿಲ್ಲ ಮತ್ತು ಅಂತಹ ಅರ್ಜಿದಾರರುಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳೆಂದು ಪರಿಗಣಿಸಲಾಗುವುದು.
- ನಿಯಮಾನುಸಾರ 1:2 ಅನುಪಾತದಂತೆ ಮೌಖಿಕ ಪರೀಕ್ಷೆಗೆ ಅರ್ಹರಾಗುವ ಎಲ್ಲಾ ಅಭ್ಯರ್ಥಿಗಳು ದಾಖಲೆ ಪರಿಶೀಲನೆ ಸಮಯದಲ್ಲಿ ಅನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಮುದ್ರಿತ ಪ್ರತಿಯನ್ನು ಹಾಗೂ ನಿಗದಿತ ಶುಲ್ಕವನ್ನು ಪಾವತಿಸಿರುವ ಚಲನ್‌ನ ಅಭ್ಯರ್ಥಿ ಪ್ರತಿಯನ್ನು ತಪ್ಪದೇ ಹಾಜುರುಪಡಿಸತಕ್ಕದ್ದು. ತಪ್ಪಿದಲ್ಲಿ ದಾಖಲೆ ಪರಿಶೀಲನೆಗೆ ಪರಿಗಣಿಸಲಾಗುವುದಿಲ್ಲ.

**ಅರ್ಜಿ ಸಲ್ಲಿಸ ಬಯಸುವ ಅರ್ಜಿದಾರರುಗಳು ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಸಿಂಧುವಾಗಿರುವಂತೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಚಾಲ್ತಿಯಲ್ಲಿರಬೇಕು:**

- ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿ.
- ಹುಟ್ಟಿದ ದಿನಾಂಕದ ಪ್ರಮಾಣ ಪತ್ರ.
- ಸರ್ಕಾರಿ ಇಲಾಖೆಯಲ್ಲಿ (ರಾಜ್ಯಸರ್ಕಾರದ ಅಥವಾ ಕೇಂದ್ರ ಸರ್ಕಾರದ)/ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ /ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾವತಿಯಿಂದ ನೀಡಲಾಗುವ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಚ್ಛಾ ಅನುಮತಿ ಪತ್ರ / ನಿರಾಕ್ಷೇಪಣ ಪ್ರಮಾಣಪತ್ರ.
- ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಕೋರುವ ಅರ್ಜಿದಾರರುಗಳು ತಹಶೀಲ್ದಾರ್‌ರಿಂದ ಪಡೆದ ನಮೂನೆ ಡಿ/ಇ/ಎಫ್ ಪ್ರಮಾಣ ಪತ್ರಗಳು.

- ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅರ್ಜಿದಾರರುಗಳು ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರ.
- ಮಾಜಿಸೈನಿಕ ಮೀಸಲಾತಿ ಕೋರುವ ಮಾಜಿ ಸೈನಿಕ ಅರ್ಜಿದಾರರುಗಳು ಸೈನ್ಯ ವಿಯೋಜನೆ ಪ್ರಮಾಣಪತ್ರ/ ನಿರಾಕ್ಷೇಪಣ ಪ್ರಮಾಣಪತ್ರ ( Discharge Certificate/NOC)
- ಮಾಜಿ ಸೈನಿಕರು ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ, ಕರ್ತವ್ಯ ನಿರ್ವಹಿಸುತ್ತಿದ್ದ ಕೇಂದ್ರ ಸಶಸ್ತ್ರದಳದ ಅಧಿಕಾರಿಗಳಿಂದ ಅವಲಂಬಿತ ಪ್ರಮಾಣಪತ್ರ ಮತ್ತು ಸೈನಿಕ ಬೋರ್ಡ್‌ನಿಂದ ಪಡೆದ ಪ್ರಮಾಣಪತ್ರ.
- ಗ್ರಾಮೀಣ ಮೀಸಲಾತಿ ಕೋರುವ ಅರ್ಜಿದಾರರುಗಳು 1ನೇ ತರಗತಿಯಿಂದ 10ನೇ ತರಗತಿಯ ವರೆಗೆ ಗ್ರಾಮೀಣ ಪ್ರದೇಶದಲ್ಲಿ  ವ್ಯಾಸಂಗ ಮಾಡಿರುವ ಬಗ್ಗೆ ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು.
- ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅರ್ಜಿದಾರರುಗಳು 1ನೇ ತರಗತಿಯಿಂದ 10ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ  ವ್ಯಾಸಂಗ ಮಾಡಿರುವ ಬಗ್ಗೆ ಕನ್ನಡ ಮಾಧ್ಯಮ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ  ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿಟ್ಟುಕೊಂಡಿರಬೇಕು..
- **ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೊಳಪಡುವ (ಸ್ಥಳೀಯ) ಅಭ್ಯರ್ಥಿಗಳು ಹೈ-ಕ ಮೀಸಲಾತಿಯ ಸಲುವಾಗಿ ಪಡೆಯಬೇಕಾಗಿರುವ ಪ್ರಮಾಣ ಪತ್ರ:**
  **ನೇರ ನೇಮಕಾತಿಯಲ್ಲಿ ಸ್ಥಳೀಯ  ವ್ಯಕ್ತಿಯೆಂಬ ಮೀಸಲಾತಿಯನ್ನು ಕ್ಲೇಮು ಮಾಡುವ ಅರ್ಜಿದಾರರು ಒಂದು ಸ್ವಯಂ ಘೋಷಿತ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು. ಪರಂತು ಅರ್ಜಿ ಸಲ್ಲಿಸುವ ದಿನಾಂಕದಂದು ಅರ್ಜಿದಾರರು ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆಯುವುದು ಕಡ್ಡಾಯವಾಗಿರುತ್ತದೆ. ತಾತ್ಕಾಲಿಕವಾಗಿ ಆಯ್ಕೆಗೊಂಡ ಅಭ್ಯರ್ಥಿಗಳು ದಾಖಲಾತಿ ಪರೀಕ್ಷೆಗಳ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ನೀಡಲಾದ ಅರ್ಹತಾ ಪ್ರಮಾಣ ಪತ್ರ (ಅನುಬಂಧ-ಎ) ನೀಡತಕ್ಕದ್ದು. ಅರ್ಹತಾ ಪ್ರಮಾಣ ಪತ್ರದಲ್ಲಿ ಸಕ್ಷಮ ಪ್ರಾಧಿಕಾರಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಅಂತಿಮ ದಿನಾಂಕದಂದು ಅಭ್ಯರ್ಥಿಯು ಸಾರ್ವಜನಿಕ ಉದ್ಯೋಗ ಆದೇಶದಂತೆ ಸ್ಥಳೀಯ ವ್ಯಕ್ತಿಯೆಂದು ಅರ್ಹತೆ ಪಡೆದಿರುತ್ತಾನೆಂದು ಒಂದು ಅಡಿ ಟಿಪ್ಪಣಿಯನ್ನು ದಾಖಲಿಸುವುದು.**

- ಮಾಹಿತಿ ಭರ್ತಿ ಮಾಡುವ ಮುನ್ನ ಬಿಳಿ ಹಾಳೆಯ ಮೇಲೆ ತಮ್ಮ ಇತ್ತೀಚಿನ ಭಾವಚಿತ್ರ, ಸಹಿ ಮತ್ತು ಗುರುತಿನ ಚೀಟಿಯನ್ನು ಪ್ರತ್ಯೇಕವಾಗಿ Scan ಮಾಡಿಕೊಂಡಿರತಕ್ಕದ್ದು.

  ಭಾವಚಿತ್ರ (ಕಲರ್) : 400 X 400 pixel, size =< 250KB

  ಸಹಿ ( ಕಪ್ಪು ಶಾಯಿ) : 400X 100 pixel, size =< 250 KB

  ಗುರುತಿನ ಚೀಟಿ : 400X 300 pixel, size =< 250 KB

  gif, jpg, jpeg and png ಫಾರಮೆಟ್‌ನಲ್ಲಿರ ತಕ್ಕದ್ದು.

ಟಿಪ್ಪಣಿ:-ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ನಂತರ ಮಾಡಿಸುವ/ಪಡೆಯುವ ಮೀಸಲಾತಿ ಪ್ರಮಾಣ ಪತ್ರಗಳನ್ನು ಯಾವುದೇ ಹಂತದಲ್ಲಿ ಗಣನೆಗೆ ತೆಗೆದುಕೊಳ್ಳುವುದಿಲ್ಲ .

**ಟಿಪ್ಪಣಿ:**

ಎ) ಮೇಲೆ ನಮೂದಿಸಿರುವ ವಿದ್ಯಾರ್ಹತೆ ಹಾಗೂ ಅನುಭವವನ್ನು ಹೊಂದದೇ ಇರುವ ಅಭ್ಯರ್ಥಿಗಳು ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದು, ನಂತರ ನಿಗದಿಪಡಿಸಲಾದ ವಿದ್ಯಾರ್ಹತೆ ಮತ್ತು ಅನುಭವವನ್ನು ಹಾಗೂ ಅಂಕಪಟ್ಟಿ ಹೊಂದಿರುವುದಿಲ್ಲವೆಂದು ನೇಮಕಾತಿ ಸಮಿತಿಗೆ ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ಯಾವುದೇ ಹಂತದಲ್ಲಾದರೂ ರದ್ದುಪಡಿಸಲಾಗುವುದು.

ಬಿ) ಡಿಪ್ಲೊಮಾ ಇತ್ಯಾದಿ ವಿದ್ಯಾರ್ಹತೆಗಳು ಪದವಿಗೆ ಸಮಾನವಾಗುವುದಿಲ್ಲ. ಆದ್ದರಿಂದ ಸಬ್-ಇನ್ಸ್‌ಪೆಕ್ಟರ್ ಹುದ್ದೆಗೆ ಈ ವಿದ್ಯಾರ್ಹತೆಯ ಅಭ್ಯರ್ಥಿಗಳು ಅರ್ಹರಾಗುವುದಿಲ್ಲ.

ಸಿ) ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನಿಗದಿತ ವಿದ್ಯಾರ್ಹತೆಯಾದ ಪದವಿಯನ್ನು ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಹಾಗೂ ಅಂಕಪಟ್ಟಿ ಇಲ್ಲದೆ ಇರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ಅರ್ಹರಾಗಿರುವುದಿಲ್ಲ. ಮೇಲಿನ ವಿದ್ಯಾರ್ಹತೆಯನ್ನು ಹೊರತುಪಡಿಸಿ ಬೇರೆ ಯಾವ ವಿದ್ಯಾರ್ಹತೆಯನ್ನೂ ಪರಿಗಣಿಸಲಾಗುವುದಿಲ್ಲ.

ಡಿ) ಅರ್ಹತಾ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು.

ಇ) ಹೈದ್ರಬಾದ್-ಕರ್ನಾಟಕ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ನೀಡಲಾಗಿರುತ್ತದೆ.

ಎಫ್) ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದರಿಂದ ಯಾವುದೇ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶ ಇರುವುದಿಲ್ಲ, ಆದರೆ ಪ್ರಮಾಣ ಪತ್ರಗಳನ್ನು / ದಾಖಲೆಗಳನ್ನು ಪಡೆದಿರಬೇಕು ಇಲ್ಲವೇ ಸಿಂಧುವಾಗಿರಬೇಕು ಹಾಗೂ ನೇಮಕಾತಿ ಸಮಿತಿಯು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಕೆಳಕಂಡ ಕ್ರಮ ಕೈಗೊಳ್ಳಲಾಗುವುದು.

ಜಿ) ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ, ಆ ಮೀಸಲಾತಿಯನ್ನು ರದ್ದು ಪಡಿಸಲಾಗುವುದು ಹಾಗೂ ಕೋರಲಾದ ಜಾತಿ/ಪಂಗಡ/ಪ್ರವರ್ಗಕ್ಕೆ ಸಂಬಂಧಿಸಿದಂತೆ, ಪ್ರಮಾಣ ಪತ್ರವನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅಭ್ಯರ್ಥಿಯ ಅಭ್ಯರ್ಥಿತನವನ್ನು ಸಾಮಾನ್ಯ ವರ್ಗದಡಿಯಲ್ಲಿ ಅರ್ಹತೆ ಹೊಂದಿದ್ದಲ್ಲಿ ಮಾತ್ರ ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

**ಪ್ರಮುಖವಾದ ಸೂಚನೆಗಳು:**

- ಅರ್ಹಗೊಂಡ ಅಭ್ಯರ್ಥಿಗಳಿಗೆ ಅಂಚೆ ಮುಖಾಂತರ ಕರೆಪತ್ರವನ್ನು ರವಾನಿಸಲಾಗುವುದಿಲ್ಲ. ವೆಬ್‌ಸೈಟ್ ಮುಖಾಂತರ ಪಡೆದುಕೊಳ್ಳಲು ಸೂಚಿಸಲಾಗಿದೆ.

- ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಿದ ನಂತರ ಯಾವುದೇ ಹಂತದಲ್ಲೂ ಮಾಹಿತಿಗಳ ಬದಲಾವಣೆಗೆ ಅವಕಾಶವಿರುವುದಿಲ್ಲ .
- ಒಂದು ವೇಳೆ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿದ ನಂತರ ತಿದ್ದುಪಡಿ ಮಾಡುವ ಅಗತ್ಯತೆ ಕಂಡು ಬಂದಲ್ಲಿ ಹೊಸ ಅರ್ಜಿಯನ್ನು ಶುಲ್ಕ ಪಾವತಿಸಿ ಸಲ್ಲಿಸತಕ್ಕದ್ದು.
- ಆನ್‌ಲೈನ್ ಮೂಲಕ ಅರ್ಜಿಯಲ್ಲಿ ಸಲ್ಲಿಸಿರುವ ಮಾಹಿತಿಗಳನ್ನೇ ಆಧಾರವಾಗಿಟ್ಟುಕೊಂಡು ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದರಿಂದ ಯಾವುದೇ ಹಂತದಲ್ಲಿ ಅಭ್ಯರ್ಥಿಯು ನೀಡಿದ ಮಾಹಿತಿಯು ಅಪೂರ್ಣ / ಅಸ್ಪಷ್ಟ / ತಪ್ಪು ಎಂದು ಕಂಡು ಬಂದಲ್ಲಿ ಅದಕ್ಕೆ ಅಭ್ಯರ್ಥಿಗಳೇ ಸಂಪೂರ್ಣ ಹೊಣೆಗಾರರಾಗಿರುತ್ತಾರೆ.
- ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಅಥವಾ ಒಂದು ಕೇಂದ್ರದಲ್ಲಿ ದೈಹಿಕ ಪರೀಕ್ಷೆಗಳಿಗೆ ಹಾಜರಾಗಿರುವ ವಿಷಯವನ್ನು ಮರೆಮಾಚಿ ಮತ್ತೊಮ್ಮೆ ಅದೇ ಕೇಂದ್ರದಲ್ಲಿ ದೈಹಿಕ ಪರೀಕ್ಷೆಗೆ ಹಾಜರಾದರೆ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳನ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತುಕ್ರಮಕ್ಕೆ ಒಳ ಪಡುವುದಲ್ಲದೇ ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.
- ಯಾವುದೇ ಅರ್ಜಿದಾರರು ಕ್ರಿಮಿನಲ್ ಮೊಕದ್ದಮೆಯಲ್ಲಿ ಶಿಕ್ಷೆಗೆ ಗುರಿಯಾಗಿರಬಾರದು. ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿ ಬಿಡುಗಡೆ / ಖುಲಾಸೆಯಾಗಿದ್ದಲ್ಲಿ ನೇಮಕಾತಿ ಪ್ರಾಧಿಕಾರವು ತೆಗೆದು ಕೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ.